**ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ 6ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು-3.**

ಸಂಖ್ಯೆ:ಎ8/ಎಸ್‌ಎಸ್‌ಎಲ್‌ಸಿ/ಪೂ.ಸಿ.ಪ/45/2021-22 ದಿನಾಂಕ:02.02.2022

**:: ಸುತ್ತೋಲೆ ::**

ವಿಷಯ: - 2021-22ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪೂರ್ವಸಿದ್ಧತಾ ಪರೀಕ್ಷೆಯನ್ನು ನಡೆಸುವ ಕುರಿತು.

ಉಲ್ಲೇಖ:-
1. ಸರ್ಕಾರದ ಆದೇಶ ಸಂಖ್ಯೆ:ಇಪಿ 197 ಎಸ್‌ಎಲ್‌ಬಿ 2021 ದಿನಾಂಕ:06.12.2021.
2. ಸರ್ಕಾರದ ಆದೇಶ ಸಂಖ್ಯೆ:ಇಡಿ 24 ಎಸ್‌ಎಲ್‌ಬಿ 2020 ದಿನಾಂಕ:18.03.2020
3. ಈ ಕಛೇರಿ ಅಧಿಸೂಚನೆ ಸಂಖ್ಯೆ:ಎ8/ಎಸ್‌ಎಸ್‌ಎಲ್‌ಸಿ.ಅಧಿಸೂಚನೆ/ಮಾರ್ಚ್-2022/39/2021-22 ದಿನಾಂಕ:07.12.2021
4. ಈ ಕಛೇರಿ ಜ್ಞಾಪನ ಸಂಖ್ಯೆ:ಇ2/ಎಸ್‌ಎಸ್‌ಎಲ್‌ಸಿ.ಪೂಸಿಪ.ಸಾದಿಲ್ವಾರು/08/2021-22 ದಿನಾಂಕ:29.01.2022.
5. ದಿನಾಂಕ:17.01.2022 ರಂದು ಹೊರಡಿಸಲಾದ ಪೂರ್ವಸಿದ್ಧತಾ ಪರೀಕ್ಷೆಯ ವೇಳಾಪಟ್ಟಿಯಂತೆ

* * * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2021-22ನೇ ಸಾಲಿನಿಂದ ಎಸ್‌ಎಸ್‌ಎಲ್‌ಸಿ ಪೂರ್ವ ಸಿದ್ದತಾ ಪರೀಕ್ಷೆಯನ್ನು ಮುಖ್ಯ ಪರೀಕ್ಷೆಗೆ ಪ್ರಶ್ನೆಪತ್ರಿಕೆ ಸಿದ್ದಪಡಿಸುವ ಮಾದರಿಯಂತೆಯೇ ಸಿದ್ದಪಡಿಸಿ, ವೇಳಾ ಪಟ್ಟಿಯನ್ನು ಪ್ರಕಟಿಸಿ, ಪ್ರಶ್ನೆಪತ್ರಿಕೆಗಳನ್ನು ಸಂಬಂಧಿಸಿದ ಉಪನಿರ್ದೇಶಕರು (ಆಡಳಿತ) ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಸರ್ಕಾರದಿಂದ ಮಾನ್ಯತೆ ಪಡೆದ ಖಾಸಗಿ ಪ್ರೌಢ ಶಾಲೆಗಳಿಗೆ ರವಾನಿಸಿ ಶಾಲಾ ಹಂತದಲ್ಲಿಯೇ ಶಾಲಾ ವಿದ್ಯಾರ್ಥಿಗಳಿಗೆ ಪರೀಕ್ಷೆಯನ್ನು ನಡೆಸಿ, ಶಾಲಾ ಹಂತದಲ್ಲಿಯೇ ಮೌಲ್ಯಮಾಪನ ಕೈಗೊಳ್ಳಲು ಉಲ್ಲೇಖಿತ-1ರ ಸರ್ಕಾರದ ಆದೇಶ ಸಂಖ್ಯೆ:ಇಪಿ 197 ಎಸ್‌ಎಲ್‌ಬಿ 2021 ದಿನಾಂಕ:06.12.2021ರಲ್ಲಿ ಸೂಚಿಸಲಾಗಿದೆ. ಉಲ್ಲೇಖಿತ-3ರ ಈ ಕಛೇರಿಯ ಅಧಿಸೂಚನೆ ದಿನಾಂಕ:07.12.2021ರಲ್ಲಿ ಪೂರ್ವಸಿದ್ದತಾ ಪರೀಕ್ಷೆಗೆ ಕೈಗೊಳ್ಳಬೇಕಾದ ಕರ್ತವ್ಯಗಳು ಹಾಗೂ ಜವಾಬ್ದಾರಿಗಳ ಬಗ್ಗೆ ವಿವರಿಸಲಾಗಿರುತ್ತದೆ. ಸದರಿ ಪೂರ್ವಸಿದ್ದತಾ ಪರೀಕ್ಷೆಯು ದಿನಾಂಕ:21.02.2022 ರಿಂದ 26.02.2022ರವರೆಗೆ ನಡೆಯಲಿದ್ದು, ವೇಳಾಪಟ್ಟಿಯನ್ನು ಹೊರಡಿಸಲಾಗಿರುತ್ತದೆ.

ಮುಂದುವರೆದು, 2021-22ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪೂರ್ವ ಸಿದ್ದತಾ ಪರೀಕ್ಷೆಯನ್ನು ಶಾಲಾ ವಿದ್ಯಾರ್ಥಿಗಳಿಗೆ ನಡೆಸುವ ಕುರಿತು ಉಪನಿರ್ದೇಶಕರು (ಆಡಳಿತ), ಕ್ಷೇತ್ರ ಶಿಕ್ಷಣಾಧಿಕಾರಿಗಳ ಮತ್ತು ಶಾಲಾ ಮುಖ್ಯೋಪಾಧ್ಯಾಯರ ಕರ್ತವ್ಯ ಮತ್ತು ಜವಾಬ್ದಾರಿಗಳು ಕೆಳಕಂಡಂತಿದೆ.

**ಉಪನಿರ್ದೇಶಕರು (ಆಡಳಿತ) ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕರ್ತವ್ಯ ಮತ್ತು ಜವಾಬ್ದಾರಿಗಳು**

- ಎಸ್‌ಎಸ್‌ಎಲ್‌ಸಿ ಮುಖ್ಯ ಪರೀಕ್ಷೆಗೆ ಪ್ರಶ್ನೆಪತ್ರಿಕೆ ಸಿದ್ದಪಡಿಸುವ ಮಾದರಿಯಂತೆಯೇ ಪೂರ್ವ ಸಿದ್ದತಾ ಪರೀಕ್ಷೆಗೂ ಸಿದ್ದಪಡಿಸಿ, ಮಂಡಳಿಯಿಂದ ಸರಬರಾಜಾಗುವ ಪ್ರಶ್ನೆ ಪತ್ರಿಕೆಗಳ ಭಾಂಗಿಗಳನ್ನು ಉಪನಿರ್ದೇಶಕರು (ಆಡಳಿತ)ರವರು ಸ್ವೀಕರಿಸಿ, ಸಂಬಂಧಿಸಿದ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ವಿತರಿಸುವುದು.
- ಉಪನಿರ್ದೇಶಕರು (ಆಡಳಿತ)ರವರಿಂದ ಸ್ವೀಕರಿಸಿದ ಪ್ರಶ್ನೆ ಪತ್ರಿಕೆಗಳ ಭಾಂಗಿಗಳನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳು ತಮ್ಮ ತಾಲ್ಲೂಕು ಕೇಂದ್ರಸ್ಥಾನದ ಸ್ಟ್ರಾಂಗ್ ರೂಂನಲ್ಲಿ ಸೂಕ್ತ ಭದ್ರತೆಯೊಂದಿಗೆ ಸುರಕ್ಷಿತವಾಗಿ ಸಂರಕ್ಷಿಸಿಟ್ಟುಕೊಳ್ಳುವುದು.
- ಕ್ಷೇತ್ರ ಶಿಕ್ಷಣಾಧಿಕಾರಿಗಳು ತಮ್ಮ ತಾಲ್ಲೂಕು ವ್ಯಾಪ್ತಿಯಲ್ಲಿ 8 ರಿಂದ 10 ಪ್ರೌಢಶಾಲೆಗಳಿಗೆ ಒಂದು ರೂಟ್ ನಂತೆ ರೂಟ್ ಮ್ಯಾಪ್ ಸಿದ್ದಪಡಿಸಿಕೊಳ್ಳುವುದು.

- ಉಲ್ಲೇಖಿತ–4ರ ಈ ಕಛೇರಿ ಜ್ಞಾಪನದ ದಿನಾಂಕ:29.01.2022ರಲ್ಲಿ ಸೂಚಿಸಿರುವ ನಮೂನೆಯಂತೆ ವಲಯ/ತಾಲ್ಲೂಕಿನ ಹೆಸರು, ಮಾರ್ಗಗಳ ಸಂಖ್ಯೆ ಮತ್ತು ಪ್ರತಿ ಮಾರ್ಗಕ್ಕೆ ಟ್ಯಾಗ್ ಮಾಡಿದ ಒಟ್ಟು ಪ್ರೌಢಶಾಲೆಗಳ ಸಂಖ್ಯೆಯ ವಿವರವನ್ನು ಕೂಡಲೇ ಮಂಡಳಿಗೆ ಕಳುಹಿಸುವುದು.
- ಪ್ರತಿ ರೂಟ್‌ಗೆ ಇಬ್ಬರು ಮಾರ್ಗಾಧಿಕಾರಿಗಳನ್ನು ನೇಮಿಸುವುದು.
- ದಿನಾಂಕ:17.01.2022ರಂದು ಮಂಡಳಿಯಿಂದ ಹೊರಡಿಸಿದ ವೇಳಾ ಪಟ್ಟಿಯಂತೆ ಕ್ಷೇತ್ರ ಶಿಕ್ಷಣಾಧಿಕಾರಿಗಳು ಅಯಾ ದಿನದ ವಿಷಯದ ಪ್ರಶ್ನೆಪತ್ರಿಕೆಗಳ ಭಾಂಗಿಗಳನ್ನು ಮಾತ್ರ ಸೂಕ್ತ ಭದ್ರತೆಯೊಂದಿಗೆ ಸಿದ್ದಪಡಿಸಿಕೊಂಡಿರುವ ರೂಟ್ ಮ್ಯಾಪ್‌ನಂತೆ ಸಂಬಂಧಿಸಿದ ಪ್ರೌಢಶಾಲೆಗಳಿಗೆ ರವಾನಿಸುವುದು.
- ಎಸ್.ಎಸ್.ಎಲ್.ಸಿ ಪೂರ್ವ ಸಿದ್ದತಾ ಪರೀಕ್ಷೆಗೆ ಪ್ರಶ್ನೆ ಪತ್ರಿಕೆಗಳ ಭಾಂಗಿಗಳನ್ನು ಮಂಡಳಿಯಿಂದ ನೇರವಾಗಿ ಜಿಲ್ಲಾ ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆರವರಿಗೆ ಸರಬರಾಜಾಗುತ್ತಿದ್ದು, ಅಲ್ಲಿಂದ ಕ್ಷೇತ್ರ ಶಿಕ್ಷಣಾಧಿಕಾರಿಗಳು ತಮ್ಮ ತಾಲ್ಲೂಕು ಕೇಂದ್ರಸ್ಥಾನದ ಸ್ಟ್ರಾಂಗ್ ರೂಂನಲ್ಲಿ ಸೂಕ್ತ ಭದ್ರತೆಯೊಂದಿಗೆ ಸುರಕ್ಷಿತವಾಗಿ ಸಂರಕ್ಷಿಸಿಟ್ಟುಕೊಳ್ಳುವುದರಿಂದ, ಜಿಲ್ಲಾ/ತಾಲ್ಲೂಕು ಖಜಾನೆಗಳಲ್ಲಿ ಠೇವಣಿಸುವ ಅವಶ್ಯಕತೆ ಇರುವುದಿಲ್ಲ.
- ಪೂರ್ವ ಸಿದ್ದತಾ ಪರೀಕ್ಷೆ ಕುರಿತು ಉಲ್ಲೇಖಿತ–1ರ ಸರ್ಕಾರದ ಆದೇಶ ಮತ್ತು ಉಲ್ಲೇಖಿತ–3ರ ಮಂಡಳಿ ಅಧಿಸೂಚನೆ ಹಾಗೂ ಈ ಸುತ್ತೋಲೆಯಲ್ಲಿ ವಿವರಿಸಿರುವಂತೆ ಸೂಕ್ತ ಕ್ರಮಕೈಗೊಳ್ಳುವ ಕುರಿತು ಪೂರ್ವಭಾವಿಯಾಗಿ ತಮ್ಮ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ, ಸರ್ಕಾರದಿಂದ ಮಾನ್ಯತೆ ಪಡೆದ ಅನುದಾನಿತ ಮತ್ತು ಅನುದಾನ ರಹಿತ ಪ್ರೌಢಶಾಲೆಗಳ ಮುಖ್ಯ ಶಿಕ್ಷಕರ ಸಭೆ ಕರೆದು ಸೂಕ್ತ ಮಾರ್ಗದರ್ಶನ ನೀಡಿ ಪೂರ್ವ ಸಿದ್ದತಾ ಪರೀಕ್ಷೆಯು ವ್ಯವಸ್ಥಿತವಾಗಿ ನಡೆಯಲು ಕ್ರಮವಹಿಸುವುದು.

**<u>ಶಾಲಾ ಮುಖ್ಯೋಪಾಧ್ಯಾಯರ ಕರ್ತವ್ಯ ಮತ್ತು ಜವಾಬ್ದಾರಿಗಳು</u>**

- ಸಂಬಂಧಿಸಿದ ಪ್ರೌಢಶಾಲಾ ಮುಖ್ಯ ಶಿಕ್ಷಕರು ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಸ್ವೀಕರಿಸಿದ ಅಯಾ ದಿನದ ಪ್ರಶ್ನೆಪತ್ರಿಕೆಗಳ ಭಾಂಗಿಗಳನ್ನು ತಮ್ಮ ಶಾಲೆಯ ಅಲ್ಮೇರಾದಲ್ಲಿ ಸುರಕ್ಷಿತವಾಗಿಟ್ಟು ಸೀಲ್ ಮಾಡುವುದು. ಮುಖ್ಯ ಪರೀಕ್ಷೆಯಲ್ಲಿ ಪ್ರಶ್ನೆಪತ್ರಿಕೆಯನ್ನು ವಿದ್ಯಾರ್ಥಿಗಳ ಸಮ್ಮುಖದಲ್ಲಿ ತೆರೆಯುವ ಕ್ರಮದಂತೆ ಪೂರ್ವಸಿದ್ದತಾ ಪರೀಕ್ಷೆಯಲ್ಲಿಯೂ ಪರೀಕ್ಷಾ ಸಮಯದಂದು ತೆರೆದು ವಿದ್ಯಾರ್ಥಿಗಳಿಗೆ ವಿತರಿಸುವ ಪೂರ್ಣ ಜವಾಬ್ದಾರಿ ಶಾಲಾ ಮುಖ್ಯೋಪಾಧ್ಯಾಯರದ್ದಾಗಿರುತ್ತದೆ.
- ಪರೀಕ್ಷೆ ಮುಗಿದ ನಂತರ ಉತ್ತರ ಪತ್ರಿಕೆಗಳನ್ನು ಸಂಬಂಧಿಸಿದ ಶಾಲಾ ಹಂತದಲ್ಲಿಯೇ ಮೌಲ್ಯಮಾಪನ ಮಾಡುವುದು.
- ಮೌಲ್ಯಮಾಪನಗೊಂಡ ನಂತರ ಸಂಬಂಧಿಸಿದ ಪ್ರೌಢಶಾಲೆಯಲ್ಲಿ ಪೂರ್ವ ಸಿದ್ದತಾ ಪರೀಕ್ಷೆಯ ಫಲಿತಾಂಶ ಪ್ರಕಟಿಸುವುದು.
- ಜೆ.ಟಿ.ಎಸ್ (71, 72, 73, 74), ಪರ್ಯಾಯ ವಿಷಯಗಳು (95, 96, 97, 98) ಹಾಗೂ ಎನ್.ಎಸ್.ಕ್ಯೂ.ಎಫ್ (86, 87, 88, 89, 90) ವಿಷಯಗಳ ಪೂರ್ವಸಿದ್ದತಾ ಪರೀಕ್ಷೆಗೆ ಶಾಲಾ ಹಂತದಲ್ಲಿಯೇ ಸಂಬಂಧಿಸಿದ ಶಿಕ್ಷಕರಿಂದ ಪ್ರಶ್ನೆಪತ್ರಿಕೆ ತಯಾರಿಸಿಕೊಂಡು ಪರೀಕ್ಷೆಯನ್ನು ನಡೆಸಲು ಶಾಲಾ ಮುಖ್ಯ ಶಿಕ್ಷಕರು ಕ್ರಮ ತೆಗೆದುಕೊಳ್ಳುವುದು.
- ಫಲಿತಾಂಶವನ್ನು ವಿಶ್ಲೇಷಣೆ ಮಾಡಿ, ಕಲಿಕೆಯಲ್ಲಿ ಹಿಂದುಳಿದ ವಿದ್ಯಾರ್ಥಿಗಳಿಗೆ ವಿಶೇಷ ಕಾರ್ಯಯೋಜನೆ ಮೂಲಕ ವಾರ್ಷಿಕ ಪರೀಕ್ಷೆಗೆ ಸಿದ್ದಗೊಳಿಸುವುದು ಸಂಬಂಧಿಸಿದ ಮುಖ್ಯೋಪಾಧ್ಯಾಯರ ಜವಾಬ್ದಾರಿಯಾಗಿರುತ್ತದೆ.
- ಮಂಡಳಿಯು ನಿಗಧಿಪಡಿಸಿರುವ ಪೂರ್ವಸಿದ್ದತಾ ಪರೀಕ್ಷೆಯ ವೇಳಾಪಟ್ಟಿಯಂತೆ ಪರೀಕ್ಷೆಯನ್ನು ನಡೆಸುವುದು.

- ಮಂಡಳಿಯಿಂದ ಪೂರ್ವ ಸಿದ್ದತಾ ಪರೀಕ್ಷೆಗೆ ಪ್ರಶ್ನೆಪ್ರತಿಕೆಗಳನ್ನು ಮಾತ್ರ ಸರಬರಾಜು ಮಾಡಲಾಗುವುದು. ಉಳಿದ ಸಿದ್ದತೆಗಳನ್ನು ಸಂಬಂಧಿಸಿದ ಶಾಲೆಗಳ ಮುಖ್ಯ ಶಿಕ್ಷಕರು ಮಾಡಿಕೊಳ್ಳುವುದು.

**ಪ್ರಶ್ನೆಪತ್ರಿಕೆಗಳನ್ನು ರವಾನಿಸಲು ವಾಹನ ವೆಚ್ಚ ಮತ್ತು ಮಾರ್ಗಾಧಿಕಾರಿಗಳ ಸಂಭಾವನೆ**

- ಎಸ್‌ಎಸ್‌ಎಲ್‌ಸಿ ಪೂರ್ವ ಸಿದ್ದತಾ ಪರೀಕ್ಷೆಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳ ತಾಲ್ಲೂಕು ಕೇಂದ್ರಸ್ಥಾನದ ಸ್ಟ್ರಾಂಗ್ ರೂಂನಿಂದ ಶಾಲೆಗಳಿಗೆ ಪ್ರಶ್ನೆಪತ್ರಿಕೆಗಳನ್ನು ರವಾನಿಸಲು ವಾಹನ ವೆಚ್ಚ ಒಂದು ರೂಟ್‌ಗೆ ಒಂದು ದಿನಕ್ಕೆ ರೂ.1400/–ರಂತೆ ನಿಗಧಿಪಡಿಸಲಾಗಿದೆ.
- ಕ್ಷೇತ್ರ ಶಿಕ್ಷಣಾಧಿಕಾರಿಗಳ ತಾಲ್ಲೂಕು ಕೇಂದ್ರಸ್ಥಾನದ ಸ್ಟ್ರಾಂಗ್ ರೂಂನಿಂದ ಶಾಲೆಗಳಿಗೆ ಪ್ರಶ್ನೆಪತ್ರಿಕೆ ರವಾನಿಸಲು ಮಾರ್ಗಾಧಿಕಾರಿಗಳ ಸಂಭಾವನೆ ಪ್ರತಿ ದಿನಕ್ಕೆ ಪ್ರತಿ ಮಾರ್ಗಾಧಿಕಾರಿಗೆ ರೂ.150/–ರಂತೆ ನಿಗಧಿಪಡಿಸಿದೆ. (ಪ್ರತಿ ರೂಟ್‌ಗೆ ಇಬ್ಬರು ಮಾರ್ಗಾಧಿಕಾರಿಗಳನ್ನು ನೇಮಿಸುವುದು)
- ರೂಟ್ ಸಂಖ್ಯೆ ಆಧರಿಸಿ ವಾಹನ ವೆಚ್ಚ ಮತ್ತು ಮಾರ್ಗಾಧಿಕಾರಿಗಳ ಸಂಭಾವನೆಯ ಸಾದಿಲ್ವಾರು ಮೊತ್ತವನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮಂಡಳಿಯಿಂದ ವಿತರಿಸಲಾಗುವುದು.

**ವಿಶೇಷ ಸೂಚನೆ:–**

ಪರೀಕ್ಷಾ ಅಕ್ರಮಗಳಲ್ಲಿ ಪಾಲ್ಗೊಳ್ಳುವವರು ಮತ್ತು ಇದಕ್ಕೆ ಸಹಕರಿಸುವವರು / ಪ್ರಚೋದಿಸುವವರು ಇಲಾಖಾ ಅಧಿಕಾರಿ/ಸಿಬ್ಬಂಧಿಗಳಾಗಿರಲಿ, ವಿದ್ಯಾರ್ಥಿಗಳಾಗಿರಲಿ, ಶಿಕ್ಷಕರಾಗಿರಲಿ ಅಥವಾ ಬಾಹ್ಯ ವ್ಯಕ್ತಿಗಳಾಗಿರಲಿ ಇವರ ಮೇಲೆ ಕ್ರಿಮಿನಲ್ ಮೊಕ್ಕದ್ದಮೆ ದಾಖಲಿಸಲು ಕಾನೂನಿನಲ್ಲಿರುವ ಅವಕಾಶಗಳನ್ನು ಬಳಸಿಕೊಂಡು ಕಟ್ಟುನಿಟ್ಟಿನ ನಿರ್ದಾಕ್ಷಿಣ್ಯ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂಬ ಅಂಶವನ್ನು ಎಲ್ಲಾ ಪರೀಕ್ಷಾ ನಿರ್ವಹಣಾ ಪ್ರಾಧಿಕಾರಗಳಿಗೆ ಸ್ಪಷ್ಟಪಡಿಸುತ್ತಾ ಯಾವುದೇ ರೀತಿಯ ಪರೀಕ್ಷಾ ಅಕ್ರಮ / ಲೋಪದೋಷಗಳಿಗೆ ಅವಕಾಶ ನೀಡದಂತೆ ಸುಸೂತ್ರವಾಗಿ ಎಸ್‌ಎಸ್‌ಎಲ್‌ಸಿ ಪೂರ್ವಸಿದ್ಧತಾ ಪರೀಕ್ಷೆಗಳನ್ನು ನಡೆಸಲು ಕ್ರಮವಹಿಸುವಂತೆ ತಿಳಿಸಿದೆ.

(ಹೆಚ್.ಎನ್.ಗೋಪಾಲಕೃಷ್ಣ)
ನಿರ್ದೇಶಕರು, ಪರೀಕ್ಷೆಗಳು

**ಗೆ :–**

1. ರಾಜ್ಯದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರು (ಆಡಳಿತ), ಸಾ ಶಿ ಇ ರವರು ಕೂಡಲೇ ಕ್ರಮವಹಿಸಲು ತಿಳಿಸಿದೆ.
2. ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಸರ್ಕಾರದಿಂದ ಮಾನ್ಯತೆ ಪಡೆದ ಅನುದಾನಿತ, ಅನುದಾನರಹಿತ ಶಾಲಾ/ಕಾಲೇಜುಗಳ ಮುಖ್ಯ ಶಿಕ್ಷಕರುಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
4. ಮಂಡಳಿಯ ಎಲ್ಲಾ ಪರಿಶೀಲನಾ ಶಾಖೆಗಳ ಶಾಖಾಧಿಕಾರಿಗಳು/ಅಧೀಕ್ಷಕರುಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
5. ಶಾಖಾಧಿಕಾರಿಗಳು, ಬಿ, ಸಿ ಮತ್ತು ಲೆಕ್ಕಪತ್ರಶಾಖೆಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
6. ಶಾಖಾಧಿಕಾರಿಗಳು, ಗಣಕಶಾಖೆರವರು ಸದರಿ ಸುತ್ತೋಲೆಯನ್ನು ಮಂಡಳಿ ಜಾಲಾತಾಣ ಮತ್ತು ಶಾಲಾ ಲಾಗಿನ್ ನಲ್ಲಿ ಪ್ರಕಟಿಸುವುದು.
7. ಕಛೇರಿ ಪ್ರತಿ.

**ಪ್ರತಿಯನ್ನು ಗೌರವಗಳೊಂದಿಗೆ:**

1. ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು ರವರಿಗೆ ಸಲ್ಲಿಸಿದೆ.
2. ಮಾನ್ಯ ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ ಮತ್ತು ಧಾರವಾಡ ವಿಭಾಗ ರವರಿಗೆ ಸಲ್ಲಿಸಿದೆ.